# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಆವರಣ, ಶಿವಗಂಗೋತ್ರಿ, ದಾವಣಗೆರೆ-577 007.

## ಕಾಲೇಜು ಅಭಿವೃದ್ಧಿ ಪರಿಷತ್

ಸಂಖ್ಯೆ:ದಾವಿವಿ/ಕಾಅಪ/138/2024-25/8591 ದಿನಾಂಕ:18.10.2024

**। ಕಛೇರಿ ಜ್ಞಾಪನ ।**

ವಿಷಯ : 2024-25ನೇ ಶೈಕ್ಷಣಿಕ ಸಾಲಿನ ಮುಂದುವರಿಕೆ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ :
1. ಕಾಲೇಜಿನ ಅರ್ಜಿ ಸಂಖ್ಯೆ: AFF/218/AF/P14GKE0102/2024-25/10432
2. ವಿಶ್ವವಿದ್ಯಾನಿಲಯದ ಸ್ಥಳೀಯ ತಪಾಸಣಾ ಸಮಿತಿ ವರದಿ ದಿನಾಂಕ:08.06.2024.
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:15.10.2024.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರಲ್ಲಿ ಕಾಲೇಜಿನ ಮುಂದುವರಿಕೆ ಸಂಯೋಜನೆ ಕುರಿತು ಸ್ಥಳೀಯ ತಪಾಸಣಾ ಸಮಿತಿಯು ನೀಡಿರುವ ಶಿಫಾರಸ್ಸನ್ನು ದಿನಾಂಕ:12.06.2024ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಭೆ ಮತ್ತು ದಿನಾಂಕ:13.06.2024ರಂದು ನಡೆದ ಸಿಂಡಿಕೇಟ್ ಸಭೆಗಳಲ್ಲಿ ಯಥಾವತ್ತಾಗಿ ಅನುಮೋದಿಸಲಾಗಿದೆ.

ಅದುದರಿಂದ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000, ಪ್ರಕರಣ 59(17)ರ ಮೇರೆಗೆ, ವಿಶ್ವವಿದ್ಯಾನಿಲಯದ ಸ್ಥಳೀಯ ತಪಾಸಣಾ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಹಾಗೂ ಆನ್‌ಲೈನ್ ಸಂಯೋಜನೆಯ ನಿಗದಿತ ಮಾನದಂಡಗಳನ್ನು (Defined Parameters) ಕಡ್ಡಾಯವಾಗಿ ಅನುಷ್ಠಾನ/ಕಾರ್ಯಗತಗೊಳಿಸಿ, ಪೂರಕ ದಾಖಲೆಗಳೊಂದಿಗೆ ಅನುಪಾಲನಾ ವರದಿಯನ್ನು ದಿನಾಂಕ:25.10.2024ರೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವ ಹಾಗೂ ಈ ಕೆಳಕಂಡ ಷರತ್ತಿಗೊಳಪಟ್ಟು, 2024-25ನೇ ಸಾಲಿನ ಅವಧಿಗೆ ಮಾತ್ರ ಈ ಕೆಳಕಂಡಂತೆ ತಾತ್ಕಾಲಿಕವಾಗಿ ಮುಂದುವರಿಕೆ ಸಂಯೋಜನೆಗೆ ಅನುಮತಿಸಲಾಗಿದೆ.

| ಕಾಲೇಜಿನ ಹೆಸರು | | : | ಕೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ. | | |
|---|---|---|---|---|---|
| ಆನ್‌ಲೈನ್ ಸಂಯೋಜನಾ ಅಂಕಗಳು | | : | 71.93% | | |
| ಪದವಿ | ವಿಷಯ ಸಮೂಹ | ಭಾಷೆಗಳು | ಸಂಯೋಜನಾ ವಿಧ | ಪ್ರವೇಶ ಮಿತಿ | ವಿಭಾಗಗಳು |
| 1 | 2 | 3 | 4 | 5 | 6 |
| ಬಿ.ಇಡಿ. | ಐಚ್ಛಿಕ ವಿಷಯಗಳು | ಇಂಗ್ಲೀಷ್, ಕನ್ನಡ, | RTA | 50 | 02 |
| ಎಂ.ಇಡಿ. | | | | 50 | 01 |

**ಷರತ್ತುಗಳು:**

1. ಸ್ಥಳೀಯ ವಿಚಾರಣೆ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿ ಅನುಪಾಲನಾ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸತಕ್ಕದ್ದು.
2. ಜಾರಿಯಲ್ಲಿರುವ ಅನ್ವಯವಾಗುವ ಸರ್ಕಾರದ/ವಿಶ್ವವಿದ್ಯಾನಿಲಯ/ಯು.ಜಿ.ಸಿ/ಎ.ಐ.ಸಿ.ಟಿ/ಎನ್.ಸಿ.ಟಿ.ಇ ನಿಯಮಾವಳಿ ಆದೇಶಗಳು ಹಾಗೂ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3. ಯಾವುದೇ ಕೋರ್ಸ್‌ಗೆ/ಕೋರ್ಸ್‌ಗಳಿಗೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೇ ಶಾಖೆಗಳನ್ನು ಹೆಚ್ಚಿಸಬಾರದು.
4. ವಿಶ್ವವಿದ್ಯಾನಿಲಯವು ಕೋರ್ಸ್‌ಗಳಿಗೆ ನಿಗದಿಪಡಿಸಿರುವ ಶೈಕ್ಷಣಿಕ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
5. ಪ್ರವೇಶ ಮತ್ತು ಇತರೆ ಶುಲ್ಕಗಳನ್ನು ವಿಶ್ವವಿದ್ಯಾನಿಲಯವು ನಿಗಧಿಪಡಿಸಿದ ಧರದಲ್ಲಿ ವಿದ್ಯಾರ್ಥಿಗಳಿಂದ ಪಡೆದುಕೊಂಡು ವಿಶ್ವವಿದ್ಯಾನಿಲಯಕ್ಕೆ ನಿಗದಿತ ದಿನಾಂಕದೊಳಗೆ ಪಾವತಿಸತಕ್ಕದ್ದು.
6. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಸಲುವಾಗಿ ಕಾಲೇಜಿನಲ್ಲಿ ಶೈಕ್ಷಣಿಕ, ಬೋಧನಾ ಕ್ರಮವನ್ನು ಉತ್ತಮಪಡಿಸತಕ್ಕದ್ದು.
7. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಸೆಕ್ಷನ್ 61ರ ಮೇರೆಗೆ, ಈ ಮೇಲ್ಕಂಡಂತೆ ಕಲಂ 4ರಲ್ಲಿ ನಿಗದಿಪಡಿಸಿರುವ ಪ್ರವೇಶಮಿತಿಗಿಂತ ಹೆಚ್ಚುವರಿ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ನಿಗದಿತ ವಿದ್ಯಾರ್ಥಿ ಪ್ರವೇಶ ಮಿತಿಯ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾನಿಲಯ ಅಂಗೀಕಾರ ನೀಡುವುದಿಲ್ಲ.

ಪು.ತಿ.ನೋ

Scanned with OKEN Scanner